**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ. ಪ್ರತಾಪ್ ಸಿಂಹ ನಾಯಕ್, ರವರ ನಿಯಮ ೭೨ ರಡಿ ಗಮನ ಸೆಳೆಯುವ ಸೂಚನೆ ಸಂಖ್ಯೆ 65 ಕ್ಕೆ ಉತ್ತರವನ್ನು ಒದಗಿಸುವ ಬಗ್ಗೆ.**

**ಪ್ರಶ್ನೆ:-** ಅರಣ್ಯ (ಸಂರಕ್ಷಣೆ) ಕಾಯ್ದೆ 1980 ಜಾರಿಗೆ ಬರುವ ಪೂರ್ವದಲ್ಲಿ ರಾಜ್ಯ ಸರ್ಕಾರದ ಸಕ್ಷಮ ಪ್ರಾಧಿಕಾರಗಳು ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಭೂ ಮಂಜೂರಾತಿ ಕಾಯ್ದೆ ಮತ್ತು ನಿಯಮಗಳು ಹಾಗೂ ಇತರೆ ಕಾನೂನಾತ್ಮಕ ನಿಯಮಗಳಡಿಯಲ್ಲಿ ಅನೇಕ ಪ್ರಕರಣಗಳಲ್ಲಿ ಅರಣ್ಯ ಭೂಮಿಯನ್ನು ಮಂಜೂರು ಮಾಡಿವೆ. ಆ ವೇಳೆಯಲ್ಲಿ ಕರ್ನಾಟಕದಲ್ಲಿ ಚಾಲ್ತಿಯಲ್ಲಿದ್ದಂತಹ ಅರಣ್ಯ ಕಾಯ್ದೆಗಳನ್ವಯ ಇಂತಹ ಮಂಜೂರಾದ ಎಲ್ಲಾ ಅರಣ್ಯ ಭೂಮಿಯನ್ನು "Denotification" ಮಾಡದಿರುವುದರಿಂದ ಇಂದಿಗೂ ಇಂತಹ ಮಂಜೂರಾತಿಗಳು ಕರ್ನಾಟಕ ಅರಣ್ಯ ಇಲಾಖೆಯ ದಾಖಲೆಗಳಲ್ಲಿ "ಅರಣ್ಯ" ಎಂಬುದಾಗಿ ಮುಂದುವರೆಸಿಕೊಂಡು ಬರಲಾಗುತ್ತಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಇಲಾಖೆ ಸಚಿವರ ಗಮನವನ್ನು ಸೆಳೆಯಲು ಬಯಸುತ್ತೇನೆ.

*******

**<u>ಉತ್ತರ:</u>**

ಅರಣ್ಯ (ಸಂರಕ್ಷಣೆ) ಕಾಯ್ದೆ 1980 ಜಾರಿಗೆ ಬರುವ ಪೂರ್ವದಲ್ಲಿ ಕರ್ನಾಟಕ ಅರಣ್ಯ ಕಾಯ್ದೆ-1963 ರ ಕಲಂ-28ರನ್ವಯ ರಾಜ್ಯ ವಿಧಾನ ಮಂಡಲದ ಉಭಯ ಸದನಗಳಲ್ಲಿ ಅಂಗೀಕಾರ ಪಡೆದು ಕರ್ನಾಟಕ ರಾಜ್ಯ ಪತ್ರದಲ್ಲಿ ಅಧಿಕೃತ ಡಿನೋಟಿಫಿಕೇಶನ್ ಆದೇಶ ಹೊರಡಿಸಿ ಅರಣ್ಯ ಭೂಮಿಯನ್ನು ಮಂಜೂರಾತಿ ಮಾಡಲಾಗಿರುತ್ತದೆ. ಆದರೆ ಕೆಲವು ಪ್ರಕರಣಗಳಲ್ಲಿ ಡಿನೋಟಿಫಿಕೇಶನ್ ಪ್ರಕ್ರಿಯೆ ಅನ್ನು ಸಂಪೂರ್ಣವಾಗಿ ಕೈಗೊಂಡಿರುವುದಿಲ್ಲ. ಅಂತಹ ಡಿನೋಟಿಫಿಕೇಶನ್ ಪ್ರಕರಣಗಳಲ್ಲಿ ಮಂಜೂರಾದ ಭೂಮಿಯು ಇಂದಿಗೂ ಕರ್ನಾಟಕ ಅರಣ್ಯ ಇಲಾಖೆಯ ದಾಖಲೆಗಳಲ್ಲಿ "ಅರಣ್ಯ" ಎಂಬುದಾಗಿ ದಾಖಲಿಸಿರುತ್ತದೆ.

ಅರಣ್ಯ (ಸಂರಕ್ಷಣೆ) ಕಾಯ್ದೆ 1980 ಜಾರಿಯಾದ ನಂತರ ಸದರಿ ಡಿ-ರಿಸರ್ವ್/ಡಿ-ನೋಟಿಫೈ ಪ್ರಕ್ರಿಯೆಗೆ ಸಂಬಂಧಿಸಿದಂತೆ ಅರಣ್ಯ, ಪರಿಸರ ಹಾಗೂ ಹವಾಮಾನ ಬದಲಾವಣೆ ಮಂತ್ರಾಲಯದ ಮಾರ್ಗಸೂಚಿಯನ್ನು (ಸಂರಕ್ಷಣ್ ಏವಂ ಸಂವರ್ಧನ್) ನಿಯಮ-2023, ಅಧ್ಯಾಯ-1 ಕಂಡಿಕೆ-1.2.VII ರಲ್ಲಿ ಸೂಚಿಸಿರುವಂತೆ, ದಿನಾಂಕ:25.10.1980ರ ಪೂರ್ವದಲ್ಲಿ ಆಡಳಿತಾತ್ಮಕ ಅನುಮೋದನೆ ಪಡೆದಿರುವ ಯೋಜನೆಗಳಿಗೆ ರಾಜ್ಯ ಸರ್ಕಾರವು ಯಾವುದೇ ಯೋಜನೆಗೆ ಅರಣ್ಯ ಪ್ರದೇಶವನ್ನು ಡಿ-ರಿಸರ್ವ್/ಡಿ-ನೋಟಿಫೈ ಮಾಡಲು ನಿರ್ದಿಷ್ಟ ಆದೇಶವನ್ನು ಹೊರಡಿಸದಿದ್ದಲ್ಲಿ, ಅಂತಹ ಪ್ರಕರಣಗಳಿಗೆ ಅರಣ್ಯ (ಸಂರಕ್ಷಣಾ) ಕಾಯ್ದೆ-1980 ರನ್ವಯ ಕೇಂದ್ರ ಸರ್ಕಾರದ ಪೂರ್ವಾನುಮತಿಯು ಅಗತ್ಯವಿರುತ್ತದೆ ಎಂದು ನಮೂದಾಗಿರುತ್ತದೆ.

ಮುಂದುವರೆದು, ಮಾನ್ಯ ಸರ್ವೋಚ್ಚ ನ್ಯಾಯಾಲಯದ IA No. 16, WP No. 337/1995 ದಿನಾಂಕ:09.02.2004ರ ಆದೇಶದ ಹಿನ್ನೆಲೆಯಲ್ಲಿ ಅರಣ್ಯ ಭೂಮಿಯನ್ನು ಡಿ-ರಿಸರ್ವ್/

Sl.No: 65
15/2/24
ಐ = 72

ಡಿ-ನೋಟಿಫೈ ಮಾಡಲು ಮಾನ್ಯ ಸರ್ವೋಚ್ಚ ನ್ಯಾಯಾಲಯದ ಅನುಮತಿ ಪಡೆಯಬೇಕಿರುತ್ತದೆ.

ಅರಣ್ಯ ಭೂಮಿಯನ್ನು ಡಿ-ರಿಸರ್ವ್/ಡಿ-ನೋಟಿಫೈ ಮಾಡಲು ಹಲವು ಪ್ರಕರಣಗಳನ್ನು ಮೇಲೆ ತಿಳಿಸಿರುವಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಅನುಮಾತಿಗಾಗಿ IA ಸಲ್ಲಿಸಲಾಗಿದೆ. ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಈಗಾಗಲೇ IA ಸಲ್ಲಿಸಲಾದ ಪ್ರಕರಣಗಳಿಗೆ ಬರುವ ಆದೇಶದನುಸಾರ ಉಳಿದ ಪ್ರಕರಣಗಳಲ್ಲಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

**ಸಂಖ್ಯೆ: FEE 80 FGL 2023**

Bkhandre

**(ಈಶ್ವರ ಬಿ ಖಂಡ್ರೆ)**
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ
ಸಚಿವರು.
**ಈಶ್ವರ ಬಿ. ಖಂಡ್ರೆ**
**ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು**